3) ಖಾಸಗಿ ದೃಶ್ಯ ಮಾಧ್ಯಮಗಳ ಸಹಭಾಗಿತ್ವದಲ್ಲಿ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಬಗ್ಗೆ ಹಲವಾರು ಕಾರ್ಯಕ್ರಮಗಳನ್ನು ನಡೆಸಿ ಕೊಡಲಾಗಿರುತ್ತದೆ.

4) ಇತ್ತೀಚೆಗೆ ಬೆಂಗಳೂರಿನ ನಿಮ್ಹಾನ್ಸ್‌ನ ಕನ್‌ವೆಂಷನ್ ಸೆಂಟರ್‌ನಲ್ಲಿ ಸೈಬರ್ ಸೆಕ್ಯೂರಿಟಿ ಸಮಿಟ್ ಕಾರ್ಯಕ್ರಮದಲ್ಲಿ ಒಂದು ಪ್ರತ್ಯೇಕ ಮಳಿಗೆ ತೆಗೆದು ಅಲ್ಲಿ ಸಾರ್ವಜನಿಕರಿಗೆ ಉಪಯೋಗವಾಗುವಂತೆ ಬಿತ್ತಿ ಹಾಗೂ ಕರ ಪತ್ರಗಳನ್ನು ವಿತರಿಸಲಾಯಿತು.

ಈ) ಸೈಬರ್ ಕ್ರೈಂಗಳನ್ನು ತಡೆಗಟ್ಟಲು ರಾಜ್ಯದ ಸಿಐಡಿ ಘಟಕದಲ್ಲಿ 2002 ರಿಂದ ಒಂದು ಪ್ರತ್ಯೇಕ ಸೈಬರ್ ಕ್ರೈಂ ಪೊಲೀಸ್ ಠಾಣೆ ಕಾರ್ಯನಿರ್ವಹಿಸುತ್ತಿದ್ದು, ಇದರಲ್ಲಿ 07 ಡಿಎಸ್‌ಪಿ ಹಾಗೂ 02 ಡಿಟೆಕ್ಟಿವ್ ಇನ್ಸ್‌ಪೆಕ್ಟರ್ ಹಾಗೂ 04 ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಇತರೆ ಸಹಾಯಕ ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿರುತ್ತಾರೆ.

ಸದರಿ ಘಟಕವು ಈ ವಿಳಾಸದಲ್ಲಿ ಇರುತ್ತದೆ.

ಸೈಬರ್ ಕ್ರೈಂ ಪೊಲೀಸ್ ಠಾಣೆ,
ಕಾರ್ಲ್‌ಟನ್ ಭವನ,
ಅರಮನೆ ರಸ್ತೆ,
ಬೆಂಗಳೂರು.

ರಾಜ್ಯದಲ್ಲಿ ಒಟ್ಟು ಪೂರೈಕೆಯಾಗುತ್ತಿರುವ ವಿದ್ಯುತ್ ಪ್ರಮಾಣ

757 (243) ಶ್ರೀ ಸುರೇಶ್ ಗೌಡ (ನಾಗಮಂಗಲ) : ಮಾನ್ಯ ಇಂಧನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ರಾಜ್ಯದಲ್ಲಿ ಒಟ್ಟು ಪೂರೈಕೆ ಆಗುತ್ತಿರುವ ವಿದ್ಯುತ್ ಪ್ರಮಾಣವೆಷ್ಟು;

ಆ) ಉತ್ಪಾದನೆಯಾಗುತ್ತಿರುವ ವಿದ್ಯುತ್‌ನಲ್ಲಿ ಎಷ್ಟು ನಷ್ಟವಾಗುತ್ತಿದೆ;

ಇ) ಹಾಗಿದ್ದಲ್ಲಿ, ಲೆಕ್ಕಕ್ಕೆ ಸಿಗದಿರುವ ವಿದ್ಯುತ್ ಪ್ರಮಾಣವೆಷ್ಟು?

ಕುಮಾರಿ ಶೋಭಾ ಕರಂದ್ಲಾಜೆ (ಇಂಧನ ಸಚಿವರು) :

ಅ) ಪ್ರಸಕ್ತ ಸಾಲಿನಲ್ಲಿ (2012–13) ಜೂನ್ 2012ರ ತಿಂಗಳಿನಲ್ಲಿ ರಾಜ್ಯದಲ್ಲಿ ವಿವಿಧ ಮೂಲಗಳಿಂದ ಪೂರೈಕೆಯಾದ ವಿದ್ಯುತ್ತಿನ ಒಟ್ಟು ಪ್ರಮಾಣ 4597 ಮಿಲಿಯನ್ ಯೂನಿಟ್‌ಗಳು.

ಆ) ಮತ್ತು ಇ)

ವಿದ್ಯುತ್ ಪ್ರಸರಣಾ ಮತ್ತು ವಿತರಣೆ ನಷ್ಟವು 2011–12ನೇ ಸಾಲಿನಲ್ಲಿ ಶೇಕಡ 21.59 ಇರುತ್ತದೆ.

ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆ ಮಂಜೂರು ಮಾಡುವುದು

727 (269) ಶ್ರೀ ನಾಡಗೌಡ ವೆಂಕಟರಾವ್ (ಸಿಂಧನೂರು) : ಮಾನ್ಯ ಉಪ ಮುಖ್ಯಮಂತ್ರಿಗಳು ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಸಿಂಧನೂರು ನಗರಕ್ಕೆ ಹೊಸ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವುದಾಗಿ ಕಳೆದ 4 ಅಧಿವೇಶನದಲ್ಲಿ ಸರಕಾರ ಭರವಸೆ ನೀಡುವುದು ನಿಜವೆ;

ಆ) ಹಾಗಿದ್ದಲ್ಲಿ, ಇದುವರೆವಿಗೂ ಸಂಚಾರಿ ಪೊಲೀಸ್ ಠಾಣೆಗೆ ಮಂಜೂರಾತಿ ನೀಡದಿರಲು ಕಾರಣಗಳೇನು;

ಇ) ಸಿಂಧನೂರು ನಗರದಲ್ಲಿ ಸಂಚಾರಿ ಪೊಲೀಸ್ ಠಾಣೆ ಇಲ್ಲದಿರುವುದರಿಂದ ಸಾರ್ವಜನಿಕರು ಹಾಗೂ ವಾಹನಗಳ ಸಂಚಾರಕ್ಕೆ ತೊಂದರೆಯಾಗಿ ಅಪಘಾತಗಳು ಸಂಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಈ ಅಪಘಾತಗಳನ್ನು ತಡೆಗಟ್ಟಲು ಸರ್ಕಾರ ಈಗಲಾದರೂ ಸಂಚಾರಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡಲು ಕ್ರಮ ಕೈಗೊಳ್ಳುವುದೆ;

ಉ) ಹಾಗಿದ್ದಲ್ಲಿ, ಯಾವಾಗ ಮಂಜೂರು ಮಾಡಲಾಗುವುದು?